**ಕರ್ನಾಟಕ ಸರ್ಕಾರದ ನಡವಳಿಗಳು**

**ವಿಷಯ:** ವ್ಯವಹಾರ ಸರಳೀಕರಣಗೊಳಿಸುವ ನಿಟ್ಟಿನಲ್ಲಿ ಪ್ರಮಾಣ ಪತ್ರಗಳು/ ನೊಂದಣಿ/ಲೈಸೆನ್ಸ್ ನವೀಕರಣ ಪ್ರಕ್ರಿಯೆಗಳನ್ನು ಸ್ಥಗಿತಗೊಳಿಸಿ, ಸ್ವಯಂ ನವೀಕರಣ (Auto Renewal) ಕಾರ್ಯಗತಗೊಳಿಸುವ ಕುರಿತು.

**ಓದಲಾಗಿದೆ:**

1. ಆರ್ಥಿಕ ಮಂತ್ರಾಲಯದ ಪತ್ರ ಸಂಖ್ಯೆ: ಎಫ್ ಸಂ. 40 (06) /ಪಿಎಫ್-ಎಸ್/2017-18/ಸಂಪುಟ-V, ದಿನಾಂಕ: 17-05-2020.
2. ರಾಜ್ಯದಲ್ಲಿ ವ್ಯವಹಾರ ಸರಳೀಕರಣಗೊಳಿಸುವ ಸುಧಾರಣಾ ಅಂಶಗಳ ಅನುಷ್ಠಾನದ ಬಗ್ಗೆ ಮುಖ್ಯ ಕಾರ್ಯದರ್ಶಿಯವರ ಅಧ್ಯಕ್ಷತೆಯಲ್ಲಿ ದಿನಾಂಕ:22-09-2020ರಂದು ಸಂಜೆ 4.30 ಗಂಟೆಗೆ ನಡೆದ ವಿಡಿಯೋ ಕಾನ್ಫ್ ರೆನ್ಸ್ ಸಭೆ.
3. ನಿರ್ದೇಶಕರು, ಕಾರ್ಖಾನೆಗಳು ಮತ್ತು ಬಾಯ್ಲರುಗಳು ಇವರ ಪ್ರಸ್ತಾವನೆ ದಿನಾಂಕ:21-09-2020.
4. ಆಯುಕ್ತರು, ಕಾರ್ಮಿಕ ಆಯುಕ್ತರು ಇವರ ಪತ್ರ ಸಂಖ್ಯೆ: ಪಿ&ಎಸ್ /ಮಿಸ್ / ಸಿಆರ್ 49-2019-20, ದಿನಾಂಕ:07-09-2020

-----

**ಪ್ರಸ್ತಾವನೆ:**

ಮೇಲೆ ಓದಲಾದ(1)ರಲ್ಲಿ ದಿನಾಂಕ:17-05-2020ರ ಭಾರತ ಸರ್ಕಾರದ ಆರ್ಥಿಕ ಮಂತ್ರಾಲಯದ ಪತ್ರದಲ್ಲಿ ವ್ಯವಹಾರ ಸರಳೀಕರಣಗೊಳಿಸುವ ನಿಟ್ಟಿನಲ್ಲಿ ವಿವಿಧ ಚಟುವಟಿಕೆಗಳಿಗಾಗಿ ಪಡೆದ ಪ್ರಮಾಣಪತ್ರ / ಅನುಮೋದನೆಗಳು / ಪರವಾನಗಿಗಳ ನವೀಕರಣದ ಅವಶ್ಯಕತೆಗಳನ್ನು ರಾಜ್ಯವು ತೆಗೆದುಹಾಕುವಂತೆ ಸೂಚಿಸಿರುತ್ತದೆ. ಆದರೆ ಕೇವಲ ನವೀಕರಣ ಶುಲ್ಕವನ್ನು ಸಂಗ್ರಹಿಸುವುದರೊಂದಿಗೆ ಪ್ರಸ್ತುತ ಇರುವ ನವೀಕರಣ ಕಾರ್ಯವಿಧಾನವನ್ನು ತೆಗೆದುಹಾಕುವ ಮೂಲಕ ಅಸ್ತಿತ್ವದಲ್ಲಿರುವ ಪರವಾನಗಿ ವ್ಯವಸ್ಥೆಗಳನ್ನು ಸರಳೀಕರಣಗೊಳಿಸುವಂತೆ ರಾಜ್ಯಗಳಿಗೆ ಶಿಫಾರಸ್ಸು ಮಾಡಿರುತ್ತದೆ.

ಮೇಲೆ ಓದಲಾದ(2)ರಲ್ಲಿ ಸರ್ಕಾರದ ಮುಖ್ಯ ಕಾರ್ಯದರ್ಶಿಯವರ ಅಧ್ಯಕ್ಷತೆಯಲ್ಲಿ ದಿನಾಂಕ: 22-09-2020ರಂದು ನಡೆದ ಪುನರ್ ಪರಿಶೀಲನಾ ಸಭೆಯಲ್ಲಿ ವ್ಯವಹಾರ ಸರಳೀಕರಣಗೊಳಿಸುವ ಸುಧಾರಣಾ ಅಂಶಗಳ ಅನುಷ್ಠಾನದ ಬಗ್ಗೆ ಚರ್ಚಿಸಲಾಯಿತು. ಸದರಿ ಸಭೆಯಲ್ಲಿ ಈ ಕೆಳಕಂಡ ಸೇವೆಗಳಿಗೆ ನವೀಕರಣ ಕಾರ್ಯವಿಧಾನವನ್ನು ಸ್ಥಗಿತಗೊಳಿಸಿ, ಸ್ವಯಂ ನವೀಕರಣ ವ್ಯವಸ್ಥೆಯನ್ನು ಅಳವಡಿಸಲು ತೀರ್ಮಾನಿಸಲಾಯಿತು.

1. ಕರ್ನಾಟಕ ಅಂಗಡಿ ಮತ್ತು ವಾಣಿಜ್ಯ ಸಂಸ್ಥೆಗಳ ಕಾಯ್ದೆ, 1961 ರಡಿ ನೋಂದಣಿ.
2. ಗುತ್ತಿಗೆ ಕಾರ್ಮಿಕ (ನಿಯಂತ್ರಣ ಮತ್ತು ರದ್ದತಿ) ಕಾಯ್ದೆ, 1970 ರಡಿ ಪರವಾನಗಿ
3. ಅಂತರರಾಜ್ಯ ವಲಸೆ ಕಾರ್ಮಿಕರ (ಉದ್ಯೋಗ ನಿಯಂತ್ರಣ ಮತ್ತು ಸೇವೆ ಷರತ್ತುಗಳು) ಕಾಯ್ದೆ, 1979 ರಡಿ ಸಂಸ್ಥೆಗಳ ಪರವಾನಗಿ
4. ಕಾರ್ಖಾನೆಗಳ ಕಾಯ್ದೆ, 1948ರಡಿ ಪರವಾನಗಿ

ಮೇಲೆ ಓದಲಾದ(3)ರ ಪತ್ರದಲ್ಲಿ ನಿರ್ದೇಶಕರು, ಕಾರ್ಖಾನೆಗಳು, ಬಾಯ್ಲರುಗಳು, ಕೈಗಾರಿಕಾ ಸುರಕ್ಷತೆ ಮತ್ತು ಸ್ವಾಸ್ಥ್ಯ ಇಲಾಖೆ ಇವರು ಕಾರ್ಖಾನೆಗಳ ಕಾಯ್ದೆ 1948ರ ಅಡಿಯಲ್ಲಿ ತಿದ್ದುಪಡಿ ಪ್ರಸ್ತಾವನೆಯನ್ನು ಸಲ್ಲಿಸಿರುತ್ತಾರೆ.

ಮೇಲೆ ಓದಲಾದ(4)ರ ಪತ್ರದಲ್ಲಿ, ಈ ಕೆಳಕಂಡ ತಿದ್ದುಪಡಿಗಳಿಗೆ ಆಯುಕ್ತರು, ಕಾರ್ಮಿಕ ಇಲಾಖೆ ಇವರು ಪ್ರಸ್ತಾವನೆ ಸಲ್ಲಿಸಿರುತ್ತಾರೆ.

1. ಕರ್ನಾಟಕ ಅಂಗಡಿ ಮತ್ತು ವಾಣಿಜ್ಯ ಸಂಸ್ಥೆಗಳ ಕಾಯ್ದೆ, 1961ರ ಕಲಂ 4(4)
2. ಗುತ್ತಿಗೆ ಕಾರ್ಮಿಕ (ನಿಯಂತ್ರಣ ಮತ್ತು ರದ್ದತಿ) (ಕರ್ನಾಟಕ) ನಿಯಮಗಳು, 1974ರ ನಿಯಮ 29(2)
3. ಅಂತರರಾಜ್ಯ ವಲಸೆ ಕಾರ್ಮಿಕರ (ಉದ್ಯೋಗ ನಿಯಂತ್ರಣ ಮತ್ತು ಸೇವೆ ಷರತ್ತುಗಳು) ಕರ್ನಾಟಕ ನಿಯಮಗಳು,1981 ರ ನಿಯಮ 14(1)

ಮೇಲಿನ ಅಂಶಗಳ ಹಿನ್ನೆಲೆಯಲ್ಲಿ ಪರಿಣಾಮಕಾರಿ ಆಡಳಿತಕ್ಕಾಗಿ ಚಾಲ್ತಿಯಲ್ಲಿರುವ ನಿಯಮಗಳನ್ನು ಸರಳೀಕರಣಗೊಳಿಸಿ ಮಾಹಿತಿ ತಂತ್ರಜ್ಞಾನದ ಉಪಯೋಗಕ್ಕೆ ಹೆಚ್ಚಿನ ಒತ್ತು ನೀಡುತ್ತಾ, ಆನ್‌ಲೈನ್, ಪಾರದರ್ಶಕ, ಸ್ವಯಂಚಾಲಿತ ಸ್ವಯಂ ನವೀಕರಣ ವ್ಯವಸ್ಥೆಯನ್ನು ಅಳವಡಿಸಲು ನಿರ್ಧರಿಸಿ ಈ ಕೆಳಕಂಡ ಆದೇಶ ಹೊರಡಿಸಿದೆ

**<u>ಸರ್ಕಾರದ ಆದೇಶ ಸಂಖ್ಯೆ: ಕಾಇ 241 ಎಲ್‌ಇಟಿ 2018 , ಬೆಂಗಳೂರು, ದಿನಾಂಕ:26-09-2020</u>**

ಮೇಲ್ಕಂಡ ಪ್ರಸ್ತಾವನೆಯಲ್ಲಿ ವಿವರಿಸಿದ ಅಂಶಗಳ ಹಿನ್ನೆಲೆಯಲ್ಲಿ, ವ್ಯವಹಾರ ಸರಳೀಕರಣಗೊಳಿಸುವ ನಿಟ್ಟಿನಲ್ಲಿ ಈ ಕೆಳಕಂಡ ಕಾಯ್ದೆ/ನಿಯಮಗಳಡಿ

1. ಕರ್ನಾಟಕ ಅಂಗಡಿ ಮತ್ತು ವಾಣಿಜ್ಯ ಸಂಸ್ಥೆಗಳ ಕಾಯ್ದೆ, 1961ರಡಿ ನೋಂದಣಿ.
2. ಗುತ್ತಿಗೆ ಕಾರ್ಮಿಕ (ನಿಯಂತ್ರಣ ಮತ್ತು ರದ್ದತಿ) ಕಾಯ್ದೆ, 1970 ರಡಿ ಪರವಾನಗಿ
3. ಅಂತರರಾಜ್ಯ ವಲಸೆ ಕಾರ್ಮಿಕರ (ಉದ್ಯೋಗ ನಿಯಂತ್ರಣ ಮತ್ತು ಸೇವೆ ಷರತ್ತುಗಳು) ಕಾಯ್ದೆ, 1979 ರಡಿ ಸಂಸ್ಥೆಗಳ ಪರವಾನಗಿ.
4. ಕಾರ್ಖಾನೆಗಳ ಕಾಯ್ದೆ, 1948ರಡಿ ಪರವಾನಗಿ

ಲೈಸೆನ್ಸ್ ನವೀಕರಣ ಕಾರ್ಯವಿಧಾನವನ್ನು ಸರಳೀಕರಿಸಿ, ನಿಗದಿತ ಶುಲ್ಕ ಸ್ವೀಕೃತಿಯೊಂದಿಗೆ ಸ್ವಯಂ ನವೀಕರಣ (Auto Renewal) ವ್ಯವಸ್ಥೆಯನ್ನು ಜಾರಿಗೊಳಿಸಿ ಆದೇಶಿಸಿದೆ.

ಈ ನಿಬಂಧನೆಯಡಿಯಲ್ಲಿ, ಅರ್ಜಿದಾರ / ವ್ಯವಹಾರಗಳು ಯಾವುದೇ ಪ್ರತ್ಯೇಕ ಅರ್ಜಿಯನ್ನು ಸಲ್ಲಿಸುವ ಅಗತ್ಯವಿಲ್ಲ. ಅರ್ಜಿದಾರರು ಇಲಾಖೆಯ ಪೋರ್ಟಲ್ ಮೂಲಕ ಡಿಜಿಟಲ್ ಸಹಿ ಮಾಡಿದ ಅನುಮೋದನೆ ಪ್ರಮಾಣಪತ್ರವನ್ನು ಡೌನ್‌ಲೋಡ್ ಮಾಡಬಹುದಾಗಿದೆ. ಸದರಿ ಆದೇಶವು ಹೊರಡಿಸಿದ ದಿನಾಂಕದಿಂದ ಜಾರಿಗೆ ಬರುತ್ತದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ

(ಸಂಧ್ಯಾ ಎಲ್. ನಾಯಕ್)
ಸರ್ಕಾರದ ಉಪ ಕಾರ್ಯದರ್ಶಿಗಳು
ಕಾರ್ಮಿಕ ಇಲಾಖೆ

**<u>ಇವರಿಗೆ:</u>**

1. ಸಂಕಲನಕಾರರು, ಕರ್ನಾಟಕ ರಾಜ್ಯ ಪತ್ರ, ಬೆಂಗಳೂರು-ರಾಜ್ಯಪತ್ರದಲ್ಲಿ ಪ್ರಕಟಿಸಲು.

**<u>ಪ್ರತಿಯನ್ನು:</u>**

1. ಪ್ರಧಾನ ಮಹಾಲೇಖಪಾಲರು, ಕರ್ನಾಟಕ, ಹೊಸ ಕಟ್ಟಡ, ಆಡಿಟ್ ಭವನ, ಪೋಸ್ಟ್ ಬಾಕ್ಸ್ ಸಂಖ್ಯೆ:5398, ಬೆಂಗಳೂರು.
2. ಜಂಟಿ ನಿರ್ದೇಶಕರು, ಭಾರತ ಸರ್ಕಾರ, ಆರ್ಥಿಕ ಮಂತ್ರಾಲಯ, ನಾರ್ತ್ ಬ್ಲಾಕ್, ನವದೆಹಲಿ.

. . .3

3. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ಆರ್ಥಿಕ ಇಲಾಖೆ, ವಿಧಾನಸೌಧ, ಬೆಂಗಳೂರು.
4. ಸರ್ಕಾರದ ಪ್ರಧಾನ ಕಾರ್ಯದರ್ಶಿ, ವಾಣಿಜ್ಯ ಮತ್ತು ಕೈಗಾರಿಕಾ ಇಲಾಖೆ, ವಿಕಾಸಸೌಧ, ಬೆಂಗಳೂರು.
5. ಆಯುಕ್ತರು, ಕಾರ್ಮಿಕ ಇಲಾಖೆ, ಕಾರ್ಮಿಕ ಭವನ, ಬನ್ನೇರುಘಟ್ಟ ರಸ್ತೆ, ಬೆಂಗಳೂರು.
6. ನಿರ್ದೇಶಕರು, ಕಾರ್ಖಾನೆಗಳು, ಬಾಯ್ಲರುಗಳು, ಕೈಗಾರಿಕಾ ಸುರಕ್ಷತೆ ಮತ್ತು ಸ್ವಾಸ್ಥ್ಯ ಇಲಾಖೆ, ಬನ್ನೇರುಘಟ್ಟ ರಸ್ತೆ, ಬೆಂಗಳೂರು.
7. ಮಾನ್ಯ ಇಲಾಖಾ ಸಚಿವರ ಆಪ್ತ ಕಾರ್ಯದರ್ಶಿ, ಕಾರ್ಮಿಕ ಇಲಾಖೆ, ವಿಕಾಸಸೌಧ, ಬೆಂಗಳೂರು.
8. ಮುಖ್ಯ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು.
9. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ಕಾರ್ಮಿಕ ಇಲಾಖೆ, ಬೆಂಗಳೂರು.